# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1179 |
| 2. | ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 18.03.2025 |
| 4. | ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಅಭಿವೃದ್ಧಿ ಹಾಗೂ ಭವಿಷ್ಯದ ಹಿತದೃಷ್ಟಿಯಿಂದ ಮುಂದಿನ 20 ವರ್ಷಗಳ ಪ್ರವಾಸಿಗರು, ಹೂಡಿಕೆದಾರರ ಜನದಟ್ಟಣೆ ಗಮನಿಸಿರುವ ಸರ್ಕಾರ ಮತ್ತೊಂದು ಅಂತರಾಷ್ಟ್ರೀಯ ವಿಮಾನನಿಲ್ದಾಣವನ್ನು ನೆಲಮಂಗಲ, ರಾಮನಗರ ಸೇರಿದಂತೆ ಇನ್ನಿತರ ಸುತ್ತಮುತ್ತಲಿನ ಜಿಲ್ಲೆಯಲ್ಲಿ ಸ್ಥಾಪನೆ ಮಾಡಲು ಯೋಚಿಸಿರುವುದು ನಿಜವೇ; | ರಾಜ್ಯದ ಅಭಿವೃದ್ಧಿ ಹಾಗೂ ಭವಿಷ್ಯದ ಹಿತದೃಷ್ಟಿಯಿಂದ ಮುಂದಿನ 20 ವರ್ಷಗಳಲ್ಲಿ ಪ್ರವಾಸಿಗರು, ಹೂಡಿಕೆದಾರರ ಜನದಟ್ಟಣೆ ಗಮನದಲ್ಲಿಟ್ಟುಕೊಂಡು ಬೆಂಗಳೂರಿನಲ್ಲಿ 2ನೇ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. |
| (ಆ) | ಹಿಂದುಳಿದ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿಯ ಚಿಂತನೆಯನ್ನು ಮನಗಂಡು ಅಲ್ಲಿನ ಜನರಿಗೆ ಉದ್ಯೋಗಾವಕಾಶ ತಂತ್ರಜ್ಞಾನ ಸೇರಿದಂತೆ ವಿವಿಧ ರೀತಿಯಲ್ಲಿ ಅನುಕೂಲವಾಗುವ ನಿಟ್ಟಿನಲ್ಲಿ ಉತ್ತರ ಕರ್ನಾಟಕದ ಯಾವುದಾದರೂ ಒಂದು ಕೇಂದ್ರ ಸ್ಥಳಗಳಲ್ಲಿ ಅಂತರಾಷ್ಟ್ರೀಯ ವಿಮಾನನಿಲ್ದಾಣಕ್ಕೆ ಬೇಡಿಕೆ ಇಟ್ಟಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಇದ್ದಲ್ಲಿ ಸರ್ಕಾರ ಯಾವ ರೀತಿಯಾಗಿ ಚಿಂತನೆ ನಡೆಸಿದೆಯೇ; (ಮಾಹಿತಿ ಒದಗಿಸುವುದು) | ಉತ್ತರ ಕರ್ನಾಟಕ ಭಾಗದಲ್ಲಿ ಯಾವುದೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಇ) | ಉತ್ತರ ಕರ್ನಾಟಕ ಭಾಗದಲ್ಲಿ ಸಾವಿರಾರು ಪ್ರವಾಸಿ ತಾಣಗಳು, ಪ್ರಖ್ಯಾತ ದೇವಸ್ಥಾನಗಳು ಇರುವುದರಿಂದ ದೇಶಿ-ವಿದೇಶಿಗರಿಗೆ ಪ್ರಯಾಣ ಮಾಡಲು ಆ ಭಾಗದಲ್ಲಿ ಉದ್ಯಮಗಳು ಬೆಳೆಯಲು ಅಂತರಾಷ್ಟ್ರೀಯ ವಿಮಾನನಿಲ್ದಾಣ ಒಂದರ ಅತ್ಯವಶ್ಯಕವಾಗಿದ್ದು, ಈ ಭಾಗದಲ್ಲಿ ಜನರಿಗೆ ಉದ್ಯೋಗ ಅವಕಾಶ ಕಲ್ಪಿಸುವುದರ ಜೊತೆ ಹೊಸ ವಿಮಾನನಿಲ್ದಾಣ ಪ್ರಾರಂಭ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆಯೇ; ಹಾಗಿದ್ದಲ್ಲಿ ಈ ದಿಶೆಯಲ್ಲಿ ರಾಜ್ಯ ಸರ್ಕಾರದ ಯೋಜನೆ ಏನು? ವಿವರ ನೀಡುವುದು) | ಉತ್ತರ ಕರ್ನಾಟಕ ಭಾಗದಲ್ಲಿ ಯಾವುದೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br><br>ಆದರೆ, ಉತ್ತರ ಕರ್ನಾಟಕ ಅಭಿವೃದ್ಧಿ ದೃಷ್ಟಿಯಿಂದ ಈಗಾಗಲೇ ಬೆಳಗಾವಿ, ಹುಬ್ಬಳ್ಳಿ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ವಿಮಾನ ನಿಲ್ದಾಣಗಳನ್ನು ಪ್ರಾರಂಭಿಸಲಾಗಿರುತ್ತದೆ. ವಿಜಯಪುರ ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿದ್ದು, 2025ನೇ ಸಾಲಿನಲ್ಲಿ ಕಾರ್ಯಾಚರಣೆ ಪ್ರಾರಂಭಗೊಳ್ಳುವ ನಿರೀಕ್ಷೆಯಿದೆ.<br><br>ಮುಂದುವರೆದು, ಉತ್ತರ ಕರ್ನಾಟಕ ಭಾಗದಲ್ಲಿನ ಸಂಪರ್ಕವನ್ನು ಹೆಚ್ಚಿಸಲು, ಜನ ಸಾಮಾನ್ಯರ ಅನುಕೂಲಕ್ಕಾಗಿ ಹಾಗೂ ಈ ಪ್ರಾಂತ್ಯದ ಸಮಗ್ರ ಅಭಿವೃದ್ಧಿಗಾಗಿ ರಾಯಚೂರು ಜಿಲ್ಲೆಯಲ್ಲಿ ವಿಮಾನ ನಿಲ್ದಾಣವನ್ನು ಹಾಗೂ ಬಳ್ಳಾರಿ ಜಿಲ್ಲೆಯಲ್ಲಿ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸುವ ಕಾರ್ಯಗಳನ್ನು ಇಲಾಖೆಯು ಕೈಗೊಂಡಿರುತ್ತದೆ. |

**(ಸಂಖ್ಯೆ:ಮೂಅಇ 52 ರಾಅವಿ 2025)**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು